# ಕನ್ನಡ ಪೋಸ್ಟ್

KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 49 | Pages. 2 | Date: 20-01-2026, TUESDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 49 - ಪುಟಗಳು : 2 | 20-01-2026 | ಮಂಗಳವಾರ | Ph: 8762954248 | ದರ : ₹1


# ಅರಸೀಕೆರೆಯಿಂದ ಸ್ಪರ್ಧಿಸಿದರೆ ರೇವಣ್ಣಗೆ ಸೋಲು

## ಜೆಡಿಎಸ್ ಮುಖಂಡರ ಆರೋಪಕ್ಕೆ ಕೈ ಮುಖಂಡರ ತಿರುಗೇಟು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಹಾಸನ:ಅರಸೀಕೆರೆ ಶಾಸಕ ಹಾಗೂ ಕರ್ನಾಟಕ ಗೃಹಮಂಡಳಿ ಅಧ್ಯಕ್ಷರೂ ಆದ ಕೆ.ಎಂ.ಶಿವಲಿಂಗೇಗೌಡರ ವಿರುದ್ಧ ಜೆಡಿಎಸ್ ಮುಖಂಡರು ಕೆಲ ದಿನಗಳ ಹಿಂದೆ ಮಾಡಿದ್ದ ಆರೋಪ ಸಾಮೂಹಿಕವಾಗಿ ತಿರುಗೇಟು ನೀಡಿದ ಕಾಂಗ್ರೆಸ್ ಮುಖಂಡರು, ಅರಸೀಕೆರೆಯಿಂದ ಮಾಜಿ ಸಚಿವ ಹೆಚ್.ಡಿ.ರೇವಣ್ಣ ಸ್ಪರ್ಧೆ ಮಾಡಿದರೆ ಸೋಲಿಸಲು ನಾವೂ ಸಿದ್ಧರಿದ್ದೇವೆ ಎಂದು ಸುದ್ದಿಗೋಷ್ಟಿಯಲ್ಲಿ ಸವಾಲು ಹಾಕಿದರು.

ಆರಂಭದಲ್ಲಿ ಮಾತನಾಡಿದ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಜಿ.ಬಿ.ಶಶಿಧರ್, ಬಾಣಾವರ ಅಶೋಕ್ ಮತ್ತು ಕೆಲವರ ಏಕವಚನ ಪದ ಬಳಕೆ ಸಂಸ್ಕೃತಿಯನ್ನು ಖಂಡಿಸಿದರು.

ಅರಸೀಕೆರೆ ಇತಿಹಾಸದಲ್ಲಿ ಅದರಲ್ಲೂ ನೀರಾವರಿ ವಿಚಾರದಲ್ಲಿ ಯಾರೂ ಮಾಡಿರದ ಸಾಧನೆಯನ್ನು ಶಿವಲಿಂಗೇಗೌಡರು ಮಾಡಿದ್ದಾರೆ. ಸಾಕಷ್ಟು ಅನುದಾನ ತಂದಿದ್ದಾರೆ. ಅಭಿವೃದ್ಧಿಗೆ ನಿರಂತರ ಶ್ರಮ ಹಾಕುತ್ತಿದ್ದಾರೆ. ಹಿಂದೆ ಜೆಡಿಎಸ್‌ನವರು ಅರಸೀಕೆರೆಗೆ ಎತ್ತಿನಹೊಳೆ ಯೋಜನೆಯಡಿ ನೀರು ಹರಿಯಲು ಸಾಧ್ಯವೇ ಇಲ್ಲ ಎಂದಿದ್ದರು. ಆದರೆ ಸಣ್ಣ ಭೂ ವಿವಾದ ಮುಗಿದ ಕೂಡಲೇ ತಾಲೂಕಿನ 33 ಕೆರೆಗಳನ್ನು ತುಂಬಿಸಲು ರಾಜ್ಯ ಸರ್ಕಾರ ಅನುಮತಿ ನೀಡಿದೆ ಎಂದು ಟಾಂಗ್ ನೀಡಿದರು.

ಯಾರು ಶಿವಲಿಂಗೇಗೌಡರ ವಿರುದ್ಧ ಮಾತನಾಡಿದ್ದಾರೋ ಅವರೆಲ್ಲ ಹಿಂದೆ ಇದೇ ಶಾಸಕರ ಗರಡಿಯಲ್ಲಿ ಬೆಳೆದವರು, ಅವರಿಂದ ರಾಜಕೀಯ ಕಲಿತು ಹಾಲು, ಮಜ್ಜಿಗೆ ಮಾರುತ್ತಿದ್ದರು ಎಂದು ಜರಿಯುವುದು ವೃತ್ತಿಗೆ ಮಾಡಿರುವ ಅವಮಾನ ಎಂದು ಕಿಡಿಕಾರಿದರು. ಅರಸೀಕೆರೆಯಿಂದ ಯಾರೇ ಸ್ಪರ್ಧೆ ಮಾಡಲಿ, ಆದರೆ ಗೆಲ್ಲೋದು ಶಿವಲಿಂಗೇಗೌಡರೇ ಎಂದು ಭವಿಷ್ಯ ನುಡಿದರು.

ಹಿರಿಯ ಮುಖಂಡ ಚೌಡಯ್ಯ ಮಾತನಾಡಿ, ಅಶೋಕ್ ಶಿವಲಿಂಗೇಗೌಡರ ಜೊತೆಯಲ್ಲಿ ಬೆಳೆದವರು, ಅವರಿಗೆ ಎಪಿಎಂಸಿ, ಜಿಪಂ ಸ್ಥಾನ ನೀಡಿದ್ದು ಇದೇ ಶಿವಲಿಂಗೇಗೌಡರು. ಅವರಿಂದಲೇ ಬೆಳೆದು ಏಕವಚನ ಬಳಕೆ ಮಾಡುವುದು ತರವಲ್ಲ, 553 ಹಳ್ಳಿಗಳಿಗೆ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯಡಿ ನೀರು ತಂದಿದ್ದಾರೆ.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶ್ರೀನಿವಾಸ್ ಮಾತನಾಡಿ, ಶಾಸಕರ ವಿರುದ್ಧ ಏಕವಚನ ಪದ ಬಳಕೆ ಅವರ ಸಂಸ್ಕೃತಿ, ಸಂಕುಚಿತ ಭಾವನೆ ತಿಳಿಸಲಿದೆ, ಕ್ಷೇತ್ರದಲ್ಲಿ 4 ಬಾರಿ ಗೆಲುವು ಹುಡುಗಾಟ ಅಲ್ಲ, ನಾಲ್ಕು ಬಾರಿ ಎಂದ್ರೆ ಅರ್ಥ ಮಾಡಿಕೊಳ್ಳಿ, ಶಿವಲಿಂಗೇಗೌಡರ ಗರಡಿಯಲ್ಲಿ ಬೆಳೆದವರು ಕೀಳು ಮಟ್ಟದ ರಾಜಕೀಯ ಮಾಡುವುದು ಬೇಡ, ಅವರನ್ನು ಒಪ್ಪಿ ಕಾಂಗ್ರೆಸ್‌ಗೆ ಬರ ಮಾಡಿಕೊಂಡಿದ್ದೇವೆ, ಅರಸೀಕೆರೆ ಶಾಂತಿಯ ತೋಟ, ರೇವಣ್ಣ ಅವರನ್ನು ಕರೆದು ನಿಲ್ಲಿಸಿ ಅಭ್ಯಂತರ ಇಲ್ಲ, ಆದರೆ ನಮ್ಮ ಶಾಸಕರಿಗೆ ದೊಡ್ಡ ಬೆಂಬಲ ಇದೆ. ಅವರನ್ನು ಸೋಲಿಸಲು ಆಗಲ್ಲ. ಸಿಎಂ ಅವರೇ ಮಂತ್ರಿ ಮಾಡುವ ಭರವಸೆ ನೀಡಿದ್ದಾರೆ, ಆಗುತ್ತಾರೆ, ಆಗ ಇಡೀ ಜಿಲ್ಲೆಯ ಅಭಿವೃದ್ಧಿ ಆಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಗಂಜಿಗೆರೆ ಚಂದ್ರಶೇಖರ್ ಮಾತನಾಡಿ, ರೇವಣ್ಣ ಅವರು ಮಾಜಿ ಪ್ರಧಾನಿಯ ಮನೆಯವರು ಅವರು ರಾಜ್ಯದ ಬೇರೆ ಕಡೆ ನಿಲ್ಲಲಿ, ಅರಸೀಕೆರೆಯೇ ಏಕೆ ಬೇಕು ಎಂದು ಮಾರ್ಮಿಕವಾಗಿ ಪ್ರಶ್ನಿಸಿದರು. ಅವರೇ ಬಂದರೂ ಶಿವಲಿಂಗೇಗೌಡರ ಸೋಲು ಅಸಾಧ್ಯ, ರೇವಣ್ಣ ಅವರನ್ನು ಕರೆಯುತ್ತಿರುವವರಿಗೆ, ಅವರೇ ಸ್ಪರ್ಧೆ ಮಾಡಲು ತಾಕತ್ತು ಇಲ್ವಾ, ರೇವಣ್ಣ ಅವರೇ ಬರಲಿ ಎಂದು ಪಂಥಾಹ್ವಾನ ನೀಡಿದರು.

ಸುದ್ದಿಗೋಷ್ಟಿಯಲ್ಲಿ ಮುಖಂಡರಾದ ವೆಂಕಟೇಶ, ಉಮೇಶ್, ವೆಂಕಟಮುನಿ ಇದ್ದರು.

### ಶ್ವೇತಪತ್ರ ಬಿಡುಗಡೆಗೆ ಸಿದ್ಧ: ಬಾಬು

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೆಟ್ರೋಬಾಬು ಮಾತನಾಡಿ, ಯಾರೇ ಆಗಲಿ, ವ್ಯಕ್ತಿಗತ ಟೀಕೆ, ವೃತ್ತಿಗೆ ಅವಮಾನ ಮಾಡುವುದು ಸರಿಯಲ್ಲ ಎಂದರು. ಶಿವಲಿಂಗೇಗೌಡರು ತಂದೆಯಂತೆಯೇ ಸಣ್ಣ ವೃತ್ತಿ ಮಾಡಿ ಮೇಲೆ ಬಂದವರು, ಅವರ ಬಗ್ಗೆ ಟೀಕೆ ಮಾಡುವುದು, ಹೀಯಾಳಿಸುವುದು ಸಣ್ಣತನ ಎಂದು ಜರಿದರು.

ಶಿವಲಿಂಗೇಗೌಡ ಅವರನ್ನು ಬೈದ್ರೆ ಲೀಡರ್ ಆಗುತ್ತೇವೆ ಎಂದು ಕೊಂಡಿದ್ದರೆ ತಪ್ಪು, ಯಾರೇ ಸ್ಪರ್ಧೆ ಮಾಡಲಿ, ನಿರ್ಧಾರ ಮಾಡೋರು ಜನರು ಎಂದು ತಿರುಗೇಟು ನೀಡಿದರು.

ಸಣ್ಣವರು ದೊಡ್ಡವರ ಬಗ್ಗೆ ಮಾತನಾಡುವಾಗ ಯೋಚಿಸಬೇಕು. ಮಾತಿನ ಮೇಲೆ ಹಿಡಿತ ಇರಲಿ, ಜಿಲ್ಲೆಯನ್ನು ಕಾಂಗ್ರೆಸ್ ಮುಕ್ತ ಮಾತು, ಕನಸು, ಜೆಡಿಎಸ್ ಮುಕ್ತವಾಗಿದ್ದೂರು ಉಂಟು, ಹಾಗಾಗಿ ಮುಕ್ತ ಎನ್ನುವ ಅಹಂ ಮಾತು ಬೇಡ. ಅಧಿಕಾರ ಹಂಚಿಕೆಯಲ್ಲಿ ಶಾಸಕರು ಯಾರೂ ಮೋಸ ಮಾಡಿಲ್ಲ ಎಂದ ಅವರು, ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಯಾವ ಅವಧಿಯದ್ದು ಎಂದು ಜೆಡಿಎಸ್‌ನವರು ಹೇಳಲಿ ಶ್ವೇತಪತ್ರ ಬಿಡುಗಡೆಗೆ ನಾವು ಸಿದ್ಧರಿದ್ದೇವೆ ಎಂದು ಸವಾಲು ಹಾಕಿದರು.

ಅರಸೀಕೆರೆಯಲ್ಲಿ ಕಾಂಗ್ರೆಸ್ ಬಲಿಷ್ಠ ಆಗಿದೆ, ಮುಂದೆಯೂ ಶಿವಲಿಂಗೇಗೌಡ ಅವರೇ ಗೆಲ್ಲೋದು ಪಕ್ಕ ಎಂದು ವಿಶ್ವಾಸ ವ್ಯಕ್ತಪಡಿಸಿದರು.

# ಕಾನೂನು ಕಾಲೇಜು ವಿದ್ಯಾರ್ಥಿಗಳಿಗೆ ಪರೀಕ್ಷಾ ಪ್ರವೇಶ ಪತ್ರ ನಿರಾಕರಣೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಪರೀಕ್ಷಾ ಪ್ರವೇಶ ಪತ್ರ ನೀಡದೆ ವಿದ್ಯಾರ್ಥಿಗಳಿಗೆ ಪರೀಕ್ಷೆ ಬರೆಯಲು ಅವಕಾಶ ನೀಡದೆ ಇರುವುದನ್ನು ಖಂಡಿಸಿ ಹಾಗೂ ಅವಕಾಶ ಕಲ್ಪಿಸುವಂತೆ ಒತ್ತಾಯಿಸಿ ನಗರದ ಸರ್ಕಾರಿ ಕಾನೂನು ಕಾಲೇಜು ವಿದ್ಯಾರ್ಥಿಗಳು ಇಂದು ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿ ಕಾಂತರಾಜ್ ಮಾತನಾಡಿ, ತಾವು ಸಾಲಗಾಮೆ ರಸ್ತೆಯಲ್ಲಿರುವ ಸರ್ಕಾರಿ ಕಾನೂನು ಕಾಲೇಜಿನ ನಾಲ್ಕನೇ ವರ್ಷದ ಸೆಮಿಸ್ಟರ್‌ನ ಪರೀಕ್ಷೆಗಳನ್ನು ವಿದ್ಯಾರ್ಥಿಗಳಾಗಿದ್ದು, ನಾವುಗಳು ಪರೀಕ್ಷೆ ಬರೆಯಲು ನಮ್ಮನ್ನು ಕಾಲೇಜು ಆಡಳಿತ ಮಂಡಳಿ ತಡೆಹಿಡಿದಿದ್ದಾರೆ ಎಂದು ದೂರಿದರು.

ನಾವೆಲ್ಲರೂ ಕಾಲೇಜು ಪ್ರವೇಶ ಮತ್ತು ಪರೀಕ್ಷಾ ಶುಲ್ಕವನ್ನು ಸರಿಯಾದ ಸಮಯಕ್ಕೆ ಪಾವತಿಸಿರುತ್ತೇವೆ ಆದರೂ ನಮ್ಮಗಳ ಪ್ರವೇಶ ಪತ್ರವನ್ನು ನೀಡದೇ ನಮ್ಮಗಳ ಶೈಕ್ಷಣಿಕ ವರ್ಷದ ಭವಿಷ್ಯದಲ್ಲಿ ಆಟವಾಡಿರುವುದು ಖಂಡನೀಯ.

ಜ.19 ರಂದು ಕೆಲವು ವಿದ್ಯಾರ್ಥಿಗಳಿಗೆ ಸಂವಿಧಾನ -1 ಪರೀಕ್ಷೆ ಇದ್ದು ವಿದ್ಯಾರ್ಥಿಗಳಿಗೆ ಕಾಲೇಜು, ಬಿಸಿಐ(ಬಾರ್ ಕೌನ್ಸಿ ಲ್ ಆಫ್ ಇಂಡಿಯಾ) ಮತ್ತು ಹುಬ್ಬಳ್ಳಿ ವಿಶ್ವವಿದ್ಯಾಲಯ ಬೇಜವಾಬ್ದಾರಿ ತನದಿಂದ ಪರೀಕ್ಷಾ ಪ್ರವೇಶ ಪತ್ರ ನೀಡದೇ ಪರೀಕ್ಷೆ ಬರೆಯಲು ಅವಕಾಶ ಮಾಡಿಕೊಟ್ಟಿರುವುದಿಲ್ಲ ಎಂದರು.

ವಿದ್ಯಾರ್ಥಿಗಳನ್ನು ಪರೀಕ್ಷೆ ಬರೆಯುವುದರಿಂದ ಅವಕಾಶ ವಂಚಿತರನ್ನಾಗಿ ಮಾಡಿದ್ದು ಈ ಕುರಿತು ಕಾಲೇಜು, ಬಿಸಿಐ(ಬಾರ್ ಕೌನ್ಸಿಲ್ ಆಫ್ ಇಂಡಿಯಾ) ಮತ್ತು ಹುಬ್ಬಳ್ಳಿ ವಿಶ್ವವಿದ್ಯಾಲಯದಲ್ಲಾಗಿರುವ ಅವ್ಯವಹಾರಗಳ ಕುರಿತು ತೀವ್ರ ತನಿಖೆ ಮಾಡಬೇಕಾಗಿ ಒತ್ತಾಯಿಸಿದ ಅವರು, ಜ.20 ರಿಂದ ನಾಲ್ಕನೇ ವರ್ಷದ 7ನೇ ಸೆಮಿಸ್ಟರ್‌ನ ಪರೀಕ್ಷೆಗಳು ಆರಂಭವಾಗಲಿದೆ. ಒಂದು ವೇಳೆ ನಮಗೆ ಮುಂದಿನ ಪರೀಕ್ಷೆಗಳನ್ನು ಬರೆಯಲು ಅವಕಾಶ ನೀಡದಿದ್ದರೆ, 23 ವಿದ್ಯಾರ್ಥಿಗಳ ನಾಲ್ಕನೇ ವರ್ಷದ ಶೈಕ್ಷಣಿಕ ವರ್ಷವು ವ್ಯರ್ಥವಾಗುತ್ತದೆ ಎಂದು ತಮ್ಮ ಅಳಲು ತೋಡಿಕೊಂಡರು

ಆದ್ದರಿಂದ ಕಾಲೇಜು, ಬಿಸಿಐ(ಬಾರ್ ಇಂಡಿಯಾ) ಮತ್ತು ಹುಬ್ಬಳ್ಳಿ ವಿಶ್ವವಿದ್ಯಾಲಯದಲ್ಲಾಗಿರುವ ಅವ್ಯವಹಾರಗಳ ಕುರಿತು ತೀವ್ರ ತನಿಖೆ ನಡೆಸಿ ನಮಗೆ ಮುಂದಿನ ಪರೀಕ್ಷೆಗಳನ್ನು ಅವಕಾಶ ಮಾಡಿಕೊಡಬೇಕಾಗಿ ಮನವಿ ಮಾಡಿದರು.

ಈ ವೇಳೆ ವಿದ್ಯಾರ್ಥಿಗಳಾದ, ನಿಖಿಲ್, ಭವಿಷ್ಯ, ವರ್ಷಿಣಿ, ಅಭಿಷೇಕ್ ಚಂದನ್, ಪೂರ್ಣೇಶ್, ಅಫ್ಘಾನ್, ಸುಚಿತ್ರ, ರಶ್ಮಿ, ಐಶ್ವರ್ಯ, ಪ್ರಿಯದರ್ಶಿನಿ, ಅಜಯ್ ಕುಮಾರ್ ಇದ್ದರು.

# ಮನ್ರೇಗಾ ಹೆಸರು ಬದಲಿಗೆ ಸಂಸದ ಖಂಡನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹೊಳೆನರಸೀಪುರ: ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಬಡವರ, ದೀನ ದಲಿತರ ಹಿಂದುಳಿದವರ, ಮಹಿಳೆಯರ, ಜನಸಾಮಾನ್ಯರ, ಕೂಲಿ ಕಾರ್ಮಿಕರ ಪರವಾದ ಮಹಾತ್ಮ ಗಾಂಧೀಜಿ ನರೇಗಾ ಯೋಜನೆಯ ಸ್ವರೂಪ ಬದಲಾಯಿಸಲು, ಆ ಮೂಲಕ ಗಾಂಧೀಜಿಯವರ ಹೆಸರನ್ನು ತೆಗೆಯಲು ಹೊರಟಿರುವ ಕೇಂದ್ರ ಸರ್ಕಾರದ ಧೋರಣೆ ಖಂಡಿಸಿ ಪಟ್ಟಣದಲ್ಲಿ ಸಾಂಕೇತಿಕ ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.

ಶ್ರೀ ಜಯಚಾಮರಾಜೇಂದ್ರ ವೃತ್ತದ ಬಳಿ ಇರುವ ಮಹಾತ್ಮ ಗಾಂಧೀಜಿ ಪ್ರತಿಮೆ ಎದುರು ನಡೆದ ಧರಣಿಯಲ್ಲಿ ಪಾಲ್ಗೊಂಡು ಮಾತನಾಡಿದ ಸಂಸದ ಶ್ರೇಯಸ್ ಎಂ. ಪಟೇಲ್, ಕೇಂದ್ರ ಸರ್ಕಾರ ಜನ ವಿರೋಧಿ, ರೈತ ವಿರೋಧಿ ನೀತಿಯನ್ನು ಅನುಸರಿಸುವುದರ ಮೂಲಕ ಕೂಲಿ ಕಾರ್ಮಿಕರ ನಿತ್ಯ ಬದುಕಿನ ಮೇಲೆ ಪ್ರಹಾರ ಮಾಡುವಂತಹ ಕೆಲಸ ಮಾಡುತ್ತಿದೆ ಎಂದು ದೂರಿದರು.

ಈ ಹಿಂದೆ ಕೇಂದ್ರದಲ್ಲಿ ಯುಪಿಎ ಸರ್ಕಾರವಿದ್ದಾಗ ಅಂದಿನ ಪ್ರಧಾನ ಮಂತ್ರಿ ದಿ. ಡಾ.ಮನಮೋಹನ್ ಸಿಂಗ್ ಅವರು ಈ ಯೋಜನೆಯನ್ನು ಜಾರಿಗೆ ತಂದು ಯಶಸ್ವಿಯಾಗಿ ಅನುಷ್ಠಾನಗೊಳಿಸುವಲ್ಲಿ ಮುಂದಾಗಿದ್ದರು.

ಇದನ್ನು ಸಹಿಸಿಕೊಳ್ಳಲಾಗದ ಪ್ರಸ್ತುತ ಕೇಂದ್ರ ಸರ್ಕಾರ ಈ ಯೋಜನೆಯ ಮೂಲ ಸ್ವರೂಪ ಬದಲಾಯಿಸಲು ಹೊರಟಿರುವುದು ಖಂಡನೀಯ. ಕೇಂದ್ರದ ಈ ನಿಲುವನ್ನು ಖಂಡಿಸಿ ನಮ್ಮ ಕಾಂಗ್ರೆಸ್ ಪಕ್ಷದ ನಾಯಕರಾದ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಸಿದ್ದರಾಮಯ್ಯ, ಡಿಕೆ ಶಿವಕುಮಾರ್ ಅವರು ದೇಶಾದ್ಯಂತ ಪ್ರತಿಭಟನೆ ಹಮ್ಮಿಕೊಳ್ಳಲು ನಮಗೆ ಸೂಚನೆ ನೀಡಿದ್ದಾರೆ ಎಂದರು.

ಮುಂದಿನ ದಿವಸಗಳಲ್ಲಿ ನೋಟುಗಳಲ್ಲಿರುವ ಗಾಂಧೀಜಿಯವರ ಭಾವಚಿತ್ರ ತೆಗೆದರೂ ಆಶ್ಚರ್ಯವಿಲ್ಲ. ಆ ಮಟ್ಟಕ್ಕೆ ಕೇಂದ್ರದ ವರ್ತನೆ ಮುಂದುವರೆದಿದೆ. ನರೇಗಾ ಯೋಜನೆಗೆ ಈ ಹಿಂದೆ ಹೆಸರಿಟ್ಟಿರುವ ಹೆಸರೇ ಮುಂದುವರಿಯಬೇಕು. ಇಲ್ಲದಿದ್ದರೆ ಕೇಂದ್ರದ ವಿರುದ್ಧ ಪ್ರತಿಭಟನೆ ತೀವ್ರ ಗೊಳಿಸಲಾಗುವುದು ಎಂದು ಎಚ್ಚರಿಸಿದರು. ಇದಕ್ಕೂ ಮುನ್ನ ಸಂಸದರ ನಿವಾಸದಿಂದ ಸಂಸದರ ನೇತೃತ್ವದಲ್ಲಿ ಪ್ರತಿಭಟನೆಯಲ್ಲಿ ತೆರಳಿದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಕೇಂದ್ರ ಸರ್ಕಾರದ ವಿರುದ್ಧ ಧಿಕ್ಕಾರದ ಘೋಷಣೆ ಮೊಳಗಿಸಿದರು. ಗಾಂಧೀಜಿಯವರ ಪ್ರತಿಮೆ ಎದುರು ಕೆಲ ಸಮಯ ಧರಣಿ ನಡೆಸಿದರು. ಸಭೆ ಉದ್ದೇಶಿಸಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಜಿ.ಎಸ್. ವಿಶ್ವನಾಥ್, ಎಚ್.ಟಿ .ಲಕ್ಷ್ಮಣ, ಕಾಂಗ್ರೆಸ್ ಮುಖಂಡರಾದ ಮಂಜೇಗೌಡ, ಎಲ್. ಡಿ. ಬಸವರಾಜ, ಥಾಮಸ್, ಶೃತಿ, ಬಸವರಾಜು, ಎಮ್. ಎಸ್. ಮಂಜೇಗೌಡ ಇತರರು ಮಾತನಾಡಿದರು.

# ಜೆಡಿಎಸ್ ಮುಖಂಡರಿಗೆ ಎಚ್ಚರಿಕೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಅರಸೀಕೆರೆ : ರಾಜಕೀಯ ಕ್ಷೇತ್ರದಲ್ಲಿರುವ ನಮ್ಮ ನಡೆ ನುಡಿಯನ್ನು ಜನರು ಗಮನಿಸುತ್ತಿರುತ್ತಾರೆ ಒಬ್ಬರನ್ನ ಹೊಗಳುವ ಬರದಲ್ಲಿ ಮತ್ತೊಬ್ಬರನ್ನು ತೆಗಳುವುದು ರಾಜಕಾರಣಿಗಳಿಗೆ ಶೋಭೆ ತರುವುದಿಲ್ಲ ಎಂದು ಗ್ಯಾರಂಟಿ ಯೋಜನೆಗಳ ತಾಲೂಕು ಅನುಷ್ಠಾನ ಸಮಿತಿಯ ಅಧ್ಯಕ್ಷ ಗೀಜಿಹಳ್ಳಿ ಧರ್ಮ ಶೇಖರ್ ಅಸಮಾಧಾನ ವ್ಯಕ್ತಪಡಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ಕೆಲವು ದಿನಗಳಿಂದ ರಾಜ್ಯ ಗೃಹ ನಿರ್ಮಾಣ ಮಂಡಳಿ ಅಧ್ಯಕ್ಷರೂ ಆದ ನಮ್ಮ ಶಾಸಕರ ಬಗ್ಗೆ ಜಿಪಂ ಮಾಜಿ ಸದಸ್ಯ ಅಶೋಕ್ ಸೇರಿದಂತೆ ಇತರರು ಆಡುತ್ತಿರುವ ಮಾತುಗಳು ತರವಲ್ಲ ಎಂದರು.

ರಾಜಕೀಯ ಕ್ಷೇತ್ರದಲ್ಲಿ ಯಾರು ಶಾಶ್ವತ ಶತ್ರುಗಳೂ ಅಲ್ಲ, ಮಿತ್ರರೂ ಅಲ್ಲ ಒಂದು ಕಾಲದಲ್ಲಿ ಶಾಸಕರ ಜೊತೆಯಲ್ಲೇ ಇದ್ದು ರಾಜಕೀಯವಾಗಿ ಬೆಳೆದು,ಈಗ ಶಾಸಕರನ್ನೇ ಏಕವಚನದಲ್ಲಿ ಸಂಬೋಧಿಸುವ ಮೂಲಕ ಸಣ್ಣತನ ಪ್ರದರ್ಶಿಸುತ್ತಿರುವುದು ಸರಿಯಲ್ಲ ಎಂದು ಜೆಡಿಎಸ್ ಮುಖಂಡರಿಗೆ ತಾಕೀತು ಮಾಡಿದರು.

ಜಿಲ್ಲೆಯ ಅಭಿವೃದ್ಧಿಯಲ್ಲಿ ರೇವಣ್ಣ ಅವರ ಕೊಡುಗೆ ಇರಬಹುದು, ಆದರೆ ಅರಸೀಕೆರೆ ಅಭಿವೃದ್ಧಿಗೆ ಅವರ ಕೊಡುಗೆ ಏನು ಹೇಮಾವತಿ ನದಿ ನೀರು ಬಯಲು ಸೀಮೆ ಅರಸೀಕೆರೆಯನ್ನು ಪ್ರವೇಶ ಮಾಡಲು 80 ವರ್ಷ ಬೇಕಾಯಿತು.

ಜಿಲ್ಲೆಯ ಅಭಿವೃದ್ಧಿ ಎಂದರೆ ಹಾಸನ, ಹೊಳೆನರಸೀಪುರಕ್ಕೆ ಮಾತ್ರ ಎಂಬಂತಾಗಿತ್ತು ಆದರೆ ಕ್ಷೇತ್ರದ ಶಾಸಕರಾಗಿ ಶಿವಲಿಂಗೇಗೌಡ್ರು ಆಯ್ಕೆಯಾದ ಬಳಿಕ, ಇಂದು ಅರಸೀಕೆರೆ ರಾಜ್ಯದಲ್ಲೇ ಒಂದು ಮಾದರಿ ತಾಲೂಕಾಗಿ ರೂಪ ಗೊಳ್ಳುತ್ತಿದೆ.

ಹಾಗಾಗಿಯೇ ಕ್ಷೇತ್ರದ ಮತದಾರರು ಸತತ ನಾಲ್ಕು ಬಾರಿ ಶಿವಲಿಂಗೇಗೌಡರನ್ನು ಆಶೀರ್ವದಿಸುವ ಮೂಲಕ ವಿಧಾನಸೌಧಕ್ಕೆ ಕಳಿಸಿಕೊಟ್ಟಿದ್ದಾರೆ ಎಂಬುದನ್ನು ಶಾಸಕರನ್ನು ಟೀಕಿಸುವರು ಅರ್ಥಮಾಡಿಕೊಳ್ಳಬೇಕಿದೆ ಎಂದು ಕಿವಿ ಮಾತು ಹೇಳಿದರು.

ಕಳೆದ ವಿಧಾನಸಭೆ ಚುನಾವಣೆಯಲ್ಲಿ ಅಲ್ಪ ಮತಗಳಿಂದ ಸೋಲು ಅನುಭವಿಸಿದ ಎನ್.ಆರ್ ಸಂತೋಷ್ ಅವರನ್ನ ಬಿಟ್ಟು ಈಗ ರೇವಣ್ಣ ಅವರನ್ನು ಕರೆ ತರಲು ಹೊರಟಿರುವ ಸ್ಥಳೀಯ ಜೆಡಿಎಸ್ ಮುಖಂಡರ ನಡೆಯ ಬಗ್ಗೆ ಕ್ಷೇತ್ರದ ಜನತೆಯ ವ್ಯಂಗ್ಯವಾಗಿ ಮಾತನಾಡುತ್ತಿದ್ದಾರೆ ಎಂದು ಜೆಡಿಎಸ್ ಮುಖಂಡರ ವಿರುದ್ಧ ಲೇವಡಿ ಮಾಡಿದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆ ತಾಲೂಕು ಅನುಷ್ಠಾನ ಸಮಿತಿಯ ಸದಸ್ಯರಾದ ಸಿದ್ದೇಶ್, ಕಮಲಮ್ಮ, ಬಸವರಾಜು ಕೃಷ್ಣೇಗೌಡ, ಪರಮೇಶ್ವರ್, ಪುರುಷೋತ್ತಮ್, ಚಾಂದ್ ಪಾಷ, ಸಿರಾಜ ಅಲಿ ಬೇಗ್ ವಿರೂಪಾಕ್ಷ, ಸತೀಶ್, ಶಿವಕುಮಾರ್, ಲೋಕೇಶ್ ಇತರರು ಇದ್ದರು.

# ಮಾನವೀಯತೆ ಮೆರೆದ ಶಾಸಕ ಸಿಮೆಂಟ್ ಮಂಜು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ರಸ್ತೆ ಅಪಘಾತದಲ್ಲಿ ತೀವ್ರವಾಗಿ ಗಾಯಗೊಂಡಿದ್ದ ಯುವಕರಿಬ್ಬರನ್ನು ತಕ್ಷಣ ಆಸ್ಪತ್ರೆಗೆ ರವಾನಿಸಿ ಶಾಸಕ ಸಿಮೆಂಟ್ ಮಂಜು ಮಾನವೀಯತೆ ಮೆರೆದ ಘಟನೆ ಶನಿವಾರ ತಾಲೂಕಿನ ಮಜಗಹಳ್ಳಿ ಬಳಿ ನಡೆಯಿತು.

ಕಾರ್ಯಕ್ರಮದ ನಿಮಿತ್ತ ಸಕಲೇಶಪುರದಿಂದ ದೇವಲದಕೆರೆಗೆ ತೆರಳುತ್ತಿದ್ದ ವೇಳೆ, ಬೈಕ್‌ನಿಂದ ಬಿದ್ದ ಪರಿಣಾಮ ಯುವಕರಿಬ್ಬರಿಗೆ ಗಂಭೀರ ಗಾಯಗಳಾಗಿದ್ದವು.

ಇದನ್ನು ಗಮನಿಸಿದ ಶಾಸಕ ಸಿಮೆಂಟ್ ಮಂಜು ತಕ್ಷಣವೇ ತಮ್ಮ ವಾಹನದಿಂದ ಇಳಿದು, ಗಾಯಾಳುಗಳ ರಕ್ಷಣೆಗೆ ಮುಂದಾದರು. ರಸ್ತೆಯಲ್ಲೇ ಗಂಭೀರವಾಗಿ ಗಾಯಗೊಂಡು ಬಿದ್ದಿದ್ದ ಯುವಕನನ್ನು ಶಾಸಕರೇ ಎತ್ತಿ ಆಂಬುಲೆನ್ಸ್ ಗೆ ಕೂರಿಸಿ ಆಸ್ಪತ್ರೆಗೆ ಕಳುಹಿಸಿದರು.

ಗಾಯಗೊಂಡ ಯುವಕರು ಹಾನುಬಾಳು ಹೋಬಳಿಯೊಂದರಲ್ಲಿ ಇರುವ ರೆಸಾರ್ಟ್‌ನಲ್ಲಿ ಕೆಲಸ ಮಾಡುತ್ತಿದ್ದು, ಹಾನುಬಾಳು ಕಡೆಯಿಂದ ದೇವಲದಕೆರೆಗೆ ತೆರಳುತ್ತಿದ್ದ ವೇಳೆ ಅಪಘಾತ ಸಂಭವಿಸಿದೆ ಎಂದು ತಿಳಿದುಬಂದಿದೆ.

ಶಾಸಕರ ಸಮಯಪ್ರಜ್ಞೆ ಹಾಗೂ ಮಾನವೀಯ ನಡೆಗೆ ಸಾರ್ವಜನಿಕ ವಲಯದಲ್ಲಿ ವ್ಯಾಪಕ ಪ್ರಶಂಸೆ ವ್ಯಕ್ತವಾಗಿದೆ

# ಕ್ಷೇತ್ರೋತ್ಸವ ಕಾರ್ಯಕ್ರಮ ಯಶಸ್ವಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಮಂಡ್ಯ ವಲಯ ಸಂಶೋಧನಾ ಕೇಂದ್ರ, ವಿ.ಸಿ. ಫಾರಂ ಮಂಡ್ಯ, ಅಖಿಲ ಭಾರತ ಸುಸಂಘಟಿತ ಸಂಶೋಧನಾ ಪ್ರಾಯೋಜನೆ (ಮುಸುಕಿನ ಜೋಳ) ಹಾಗೂ ಹಾಸನ ಜಿಲ್ಲಾ ಕೃಷಿ ಇಲಾಖೆ ಸಹಯೋಗದಲ್ಲಿ ಆತ್ಮ ಯೋಜನೆಯಡಿ ಮುಸುಕಿನ ಜೋಳದಲ್ಲಿ ಕೇದಿಗೆ ರೋಗಕ್ಕೆ ಸಹಿಷ್ಣುತೆಯುಳ್ಳ ಹೈಬ್ರೀಡ್ ಎಂಎಹೆಚ್ 14-138 ಕುರಿತ ಕ್ಷೇತ್ರೋತ್ಸವ ಕಾರ್ಯಕ್ರಮವನ್ನು ಹಾಸನ ತಾಲ್ಲೂಕಿನ ದುದ್ದ ಗ್ರಾಮದಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರಾದ ಡಾ. ರಮೇಶ್‌ಕುಮಾರ್ ಪಿ. ಉದ್ಘಾಟಿಸಿ ರೈತರು ಬೆಳೆದಿರುವ ಮೆಕ್ಕೆಜೋಳ ಬೆಳೆಗಳನ್ನು ಪರಿಶೀಲಿಸಿದರು. ನಂತರ ಮಾತನಾಡಿದ ಅವರು, ಮಣ್ಣಿನಲ್ಲಿಯೇ ವಿವಿಧ ರೋಗಾಣುಗಳು ಇರುವುದರಿಂದ ರೈತರು ಪದೇ ಪದೇ ಒಂದೇ ಬೆಳೆ ಬೆಳೆದರೆ ರೋಗಗಳ ಪ್ರಮಾಣ ಹೆಚ್ಚಾಗುತ್ತದೆ. ಆದ್ದರಿಂದ ಬೆಳೆ ಪರಿವರ್ತನೆ ಅತ್ಯವಶ್ಯಕ ಎಂದು ತಿಳಿಸಿದರು.

ಕೃಷಿ ಸಂಶೋಧನಾ ಕೇಂದ್ರಗಳಲ್ಲಿ ಹೊಸ ಹೊಸ ತಳಿಗಳ ಸಂಶೋಧನೆ ನಡೆಯುತ್ತಿದ್ದು, ಸಂಶೋಧನೆ ಪೂರ್ಣಗೊಂಡ ಬಳಿಕವೇ ಅವುಗಳನ್ನು ರೈತರಿಗೆ ವಿತರಿಸಲಾಗುವುದು. ಖಾಸಗಿ ಕಂಪನಿಗಳಿಂದ ಪರಿಚಯಗೊಳ್ಳುವ ಹೊಸ ತಳಿಗಳನ್ನು ರೈತರಿಗೆ ಮಾರಾಟ ಮಾಡುವ ಮೊದಲು ಮಂಡ್ಯ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಪರೀಕ್ಷೆಗೆ ಒಳಪಡಿಸಲಾಗುತ್ತದೆ. ಗುಣಮಟ್ಟ ಹಾಗೂ ರೋಗರಹಿತವೆಂದು ದೃಢಪಟ್ಟ ಬಳಿಕವೇ ಹಾಸನ ಜಿಲ್ಲೆಯ ರೈತರಿಗೆ ಮಾರಾಟಕ್ಕೆ ಅನುಮತಿ ನೀಡಲಾಗುವುದು ಎಂದು ಹೇಳಿದರು.

ಹಾಸನ ಜಿಲ್ಲೆ ರಾಜ್ಯದಲ್ಲೇ ಹೈನುಗಾರಿಕೆಯಲ್ಲಿ ಎರಡನೇ ಸ್ಥಾನದಲ್ಲಿದ್ದು, ರೈತರು ಹೈನುಗಾರಿಕೆಯ ಜೊತೆಗೆ ಹೊಸ ಬೆಳೆಗಳನ್ನು ಅಳವಡಿಸಿಕೊಂಡು ಆರ್ಥಿಕವಾಗಿ ಸದೃಢರಾಗಬೇಕೆಂದು ಅವರು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಮಂಡ್ಯ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಸ್ತರಣಾ ನಿರ್ದೇಶಕರಾದ ಡಾ. ಸಿ. ರಾಮಚಂದ್ರ, ಹಾಸನ ಕೃಷಿ ಕಾಲೇಜಿನ ಪ್ರಭಾರ ಡೀನ್ ಕೃಷ್ಣಪ್ರಸಾದ್ ಬಿ.ಟಿ., ಕೃಷಿ ಸಂಶೋಧನಾ ಕೇಂದ್ರದ ಡಾ. ಬಸವರಾಜು ಬಿ.ಎಸ್., ಹಾಸನ ಕೃಷಿ ಇಲಾಖೆ ಉಪನಿರ್ದೇಶಕ ಎ.ಎಸ್. ಕೋಕಿಲ, ಕೃಷಿ ಅಧಿಕಾರಿ ಮೋಹನ್ ಕುಮಾರ್, ದುದ್ದ ಕೃಷಿ ಇಲಾಖೆ ಸಹಾಯಕ ತಾಂತ್ರಿಕ ವ್ಯವಸ್ಥಾಪಕರಾದ ಮೋಹನ್‌ಕುಮಾರ್ ಸೇರಿದಂತೆ ಕೃಷಿ ಇಲಾಖೆ ಅಧಿಕಾರಿಗಳು ಹಾಗೂ ರೈತರು ಉಪಸ್ಥಿತರಿದ್ದರು.

# ಭೀಮಣ್ಣ ಖಂಡ್ರೆ ನಿಧನಕ್ಕೆ ಶ್ರದ್ಧಾಂಜಲಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಹಾಸನ ಜಿಲ್ಲಾ ಘಟಕದ ವತಿಯಿಂದ ನಗರದ ಶ್ರೀ ಶಿವಲಿಂಗೇಶ್ವರ ಕಲ್ಯಾಣ ಮಂಟಪ ತಣ್ಣೀರುಹಳ್ಳ ಮಠದಲ್ಲಿ ಮಾಜಿ ಸಚಿವ ಹಾಗೂ ಮಹಾಸಭಾದ ಮಾಜಿ ರಾಷ್ಟ್ರೀಯ ಅಧ್ಯಕ್ಷ ಭೀಮಣ್ಣ ಖಂಡ್ರೆ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಮಾಜಿ ಸಚಿವ ದಿ.ಭೀಮಣ್ಣ ಖಂಡ್ರೆ ಅವರಿಗೆ ಶನಿವಾರ ಶ್ರದ್ಧಾಂಜಲಿ ಸಲ್ಲಿಸಿ ಭಾವಚಿತ್ರಕ್ಕೆ ಪೂಜೆ ಗೌರವ ಅರ್ಪಿಸಿ, ಅವರ ಆತ್ಮಕ್ಕೆ ಶಾಂತಿ ಕೋರಿ ಎರಡು ನಿಮಿಷಗಳ ಮೌನ ಆಚರಣೆ ಮಾಡಲಾಯಿತು.

ಜವೇನಹಳ್ಳಿ ಮಠದ ಮಠಾಧೀಶ ಶ್ರೀ ಸಂಗಮೇಶ್ವರ ಸ್ವಾಮೀಜಿ ಮಾತನಾಡಿ, ಭೀಮಣ್ಣ ಖಂಡ್ರೆ ಸಿದ್ಧಾಂತಗಳಿಗೆ ಬದ್ಧರಾಗಿದ್ದ ರಾಜಕಾರಣಿ, ಹೋರಾಟಗಾರ ಹಾಗೂ ಶ್ರೇಷ್ಠ ನಾಯಕರಾಗಿದ್ದರು. ತಮ್ಮ ಸಂಪೂರ್ಣ ಜೀವನ ಸಮಾಜ ಸೇವೆಗೆ ಅರ್ಪಿಸಿದ್ದರು. ಯಶಸ್ವಿ ಹಾಗೂ ಸಾರ್ಥಕ ಜೀವನ ನಡೆಸಿದ ಮಹಾನ್ ವ್ಯಕ್ತಿಯಾಗಿದ್ದರು ಎಂದು ಗುಣಗಾನ ಮಾಡಿದರು. ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಸಮಿತಿಯ ಸದಸ್ಯರಾದ ಶ್ರೀಮತಿ ಚಂದ್ರಕಲಾ ಮಾತನಾಡಿ, ಸಮಾಜದ ವಿರುದ್ಧ ಯಾರೇ ಮಾತನಾಡಿದರೂ ಅದನ್ನು ತೀವ್ರವಾಗಿ ಖಂಡಿಸುತ್ತಿದ್ದ ಭೀಮಣ್ಣ ಖಂಡ್ರೆ, ಹಾವನೂರ ವರದಿಯನ್ನು ಪ್ರಶ್ನಿಸಿದ್ದರು.ರಾಜ್ಯದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಸಂಘಟನೆಗೆ ಹೆಚ್ಚಿನ ಮಹತ್ವ ನೀಡಿದ್ದರು.

ಹುಟ್ಟು ಹೋರಾಟಗಾರ ಭೀಮಣ್ಣ ಖಂಡ್ರೆಯವರ ಬದುಕಿನ ಹೆಜ್ಜೆಗಳು ಈ ಮಣ್ಣಿನಲ್ಲಿ ಚಿರಸ್ಥಾಯಿ ಸ್ಮರಿಸಿದರು.

ಅಖಿಲ ಭಾರತ ವೀರಶೈವ-ಲಿಂಗಾಯತ ಮಹಾಸಭೆಗೆ ತಮ್ಮದೇ ಆದ ಕೊಡುಗೆ ನೀಡಿದ್ದರು, ಸಮಾಜ ಇಭ್ಭಾಗವಾಗುವುದನ್ನು ವಿರೋಧಿಸಿದ್ದರು ಎಂದು ಜಿಲ್ಲಾಧ್ಯಕ್ಷ ನವಿಲೆ ಪರಮೇಶ್ ಸ್ಮರಿಸಿದರು.

ಮಹಾಸಭಾ ರಾಷ್ಟ್ರೀಯ ಕಮಿಟಿ ಸದಸ್ಯ ಎಸ್‌ಎಚ್ ರಾಜಶೇಖರ್, ಎಸ್ ಎನ್ ಈಶ್ವರಪ್ಪ, ಯುವ ಘಟಕದ ರಾಜ್ಯ ಕಾರ್ಯದರ್ಶಿ ವಿಕ್ರಮ್ ಕೌರಿ, ಕವಿತ, ಶಿವಕುಮಾರ್ ಎಚ್.ಪಿ, ನಾಗರತ್ನ, ಯಶೋಧ ಹಿರಿವಾಟೆ, ಸುಧಾ ವಿನೋದ್, ಅನೂಪ್ , ಪ್ರಧಾನ ಕಾರ್ಯದರ್ಶಿ ರವಿ ಕುಮಾರ್, ಜಯಶಂಕರ್ ಶರತ್ ಭೂಷಣ್, ಗೀತಾ, ಹಾಗೂ ಯುವ ಘಟಕದ ಜಿಲ್ಲಾಧ್ಯಕ್ಷರಾದ ಅವಿನಾಶ್ ಜಿ.ಎಸ್ ಚಂದ್ರಶೇಖರ್ ಕೆ.ಕೆ, ಬೇಲೂರು ತಾಲ್ಲೂಕು ಅಧ್ಯಕ್ಷರಾದ ಅಡಗೂರು ಬಸವರಾಜು, ಆಲೂರು ತಾಲೂಕು ಅಧ್ಯಕ್ಷರಾದ ಅಜಿತ್, ಮಹಿಳಾ ಘಟಕದ ಜಿಲ್ಲಾಧ್ಯಕ್ಷರಾದ ಕೆ ಎಮ್ ಚಂದ್ರಮತಿ, ಶಶಿಕಲಾ ಲೋಕೇಶ್, ಗೀತಾ ಮಹೇಶ್ ಹಾಗೂ ತಾಲ್ಲೂಕು ಘಟಕದ ಮಹಿಳಾ ಅಧ್ಯಕ್ಷರಾದ ಮಮತಾ ಪಾಟೀಲ್, ವಿಜಯ್ ಕುಮಾರ್, ಮನೋಜ್ ಎಚ್ ಸಿ, ಶರತ್, ಮಂಜುದೇವ್, ದಿಲೀಪ್, ಸಿದ್ದೇಶ್, ನಾಗೇಂದ್ರ, ಪ್ರವೀಣ್, ನಿರಂಜನ್ ಹಾಗೂ ಸಮಾಜದ ಪ್ರಮುಖರು ಭಾಗವಹಿಸಿದ್ದರು.

ಕನ್ನಡ ಪೋಸ್ಟ್

E-mail : kannadapostnews@gmail.com facebook.com / ಕನ್ನಡ post



# ಗುಣಮಟ್ಟದ ಶಿಕ್ಷಣದಿಂದ ಸಮಾಜ ಸುಧಾರಣೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಚನ್ನರಾಯಪಟ್ಟಣ: ಮೌಲ್ಯಯುತ ಶಿಕ್ಷಣದ ಜತೆಗೆ ಉತ್ತಮ ಸಂಸ್ಕಾರ ನೀಡುವ ಮೂಲಕ ಶೈಕ್ಷಣಿಕ ವ್ಯವಸ್ಥೆಯನ್ನು ಅಭಿವೃದ್ಧಿಗೊಳಿಸಿದರೆ ಮಾತ್ರ ಸಮಾಜದ ಸುಧಾರಣೆ ಕಾಣಲು ಸಾಧ್ಯ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ಹಿರೀಸಾವೆ ಗ್ರಾಮದ ಜ್ಞಾನಪ್ರಭ ಇಂಟರ್ನ್ಯಾಷನಲ್ ಸ್ಕೂಲ್ ಆವರಣದಲ್ಲಿ ಶನಿವಾರ ರಾತ್ರಿ ಏರ್ಪಡಿಸಿದ್ದ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಸಮಾಜ ಸುಧಾರಣೆ ಹೊಂದಿದ್ದಲ್ಲಿ ಮಾತ್ರ ದೇಶ ಪ್ರಗತಿ ಕಾಣಲು ಸಾಧ್ಯ ಎಂದರು.

ಮಕ್ಕಳಿಗೆ ಮೊಬೈಲ್ ನೀಡುವುದನ್ನು ನಿಲ್ಲಿಸಬೇಕು. ಪಾಲಕರು ತಮ್ಮ ಮಕ್ಕಳ ಶಿಕ್ಷಣ ಹಾಗೂ ಮುಂದಿನ ಭವಿಷ್ಯದ ಬಗ್ಗೆ ಚಿಂತನೆಯೊಂದಿಗೆ ಹೆಚ್ಚು ಒತ್ತು ನೀಡಬೇಕು. ಮಕ್ಕಳ ಶೈಕ್ಷಣಿಕ ಹಾಗೂ ದೈನಂದಿನ ಚಟುವಟಿಕೆಗಳ ಬಗ್ಗೆ ಪಾಲಕರು ಗಮನ ಹರಿಸಬೇಕು. ಇದರಿಂದ ಅವರ ಬದುಕನ್ನು ಸುಂದರವಾಗಿ ಕಟ್ಟಲು ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಇತ್ತೀಚಿನ ದಿನಗಳಲ್ಲಿ ಅವಿಭಕ್ತ ಕುಟುಂಬಗಳು ಕಣ್ಮರೆಯಾಗುತ್ತಿವೆ. ವಿಭಕ್ತ ಕುಟುಂಬಗಳು ಇರಲಿ ಹೆತ್ತವರು ಹಾಗೂ ಮಕ್ಕಳೇ ಬೇರೆ ಬೇರೆ ಇರಬೇಕಾದ ಅನಿವಾರ್ಯತೆ ಎದುರಾಗಿದೆ. ಶಿಕ್ಷಣದ ವ್ಯವಸ್ಥೆ ಹಾಗೂ ಆಧುನಿಕತೆ ಬೆಳೆದಂತೆಲ್ಲ ಸಂಬಂಧಗಳ ಕೊಂಡಿ ಸಡಿಲವಾಗುತ್ತಿದೆ. ಅನಾಥಾಶ್ರಮ ಹಾಗೂ ವೃದ್ಧಾಶ್ರಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು.

ಹಾಸ್ಯ ನಟ, ಕಾಮಿಡಿ ಕಿಲಾಡಿಗಳು ಖ್ಯಾತಿಯ ಕೆ.ಆರ್.ಪೇಟೆ ಶಿವರಾಜು ಮಾತನಾಡಿ, ಆಧುನಿಕತೆ ಸಾಕಷ್ಟು ಮುಂದುವರಿದಿದ್ದು ಮೊಬೈಲ್ ಬಳಕೆ ಬಂದ ಮೇಲೆ ಪೌರಾಣಿಕ ನಾಟಕ ಪ್ರದರ್ಶನ, ಯಕ್ಷಗಾನ, ಜಾನಪದ, ಕೋಲಾಟ ಹಾಗೂ ಗ್ರಾಮೀಣ ಕ್ರೀಡೆಗಳು ಕಣ್ಮರೆಗೆ ಸರಿದಿವೆ. ಇಂದಿನ ಮಕ್ಕಳಿಗೆ ಯಾವುದು ತಿಳಿದಿಲ್ಲ. ಇದರಿಂದ ಗ್ರಾಮೀಣ ಸೊಗಡು ಮೌಲ್ಯ ಕಳೆದುಕೊಳ್ಳುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಹೆತ್ತವರ ವಿವಾಹ ವಾರ್ಷಿಕೋತ್ಸವ ಇಲ್ಲವೇ ಹುಟ್ಟು ಹಬ್ಬ ಕುರಿತು ಮೊಬೈಲ್ ನಲ್ಲಿ ಸ್ಟೇಟಸ್ ಹಾಕಿದರೆ ಏನು ಸಿಗುವುದಿಲ್ಲ. ಬದಲಿಗೆ ಅವರೊಂದಿಗೆ ಬೆರೆತು ಮಾತನಾಡಿ. ಅವರು ನಡೆದು ಬಂದ ಬದುಕಿನ ಹಾದಿಯ ಬಗ್ಗೆ ತಿಳಿದುಕೊಳ್ಳಿ. ಅದನ್ನು ಅನುಸರಿಸಿದರೆ ಬದುಕು ಬಂಗಾರವಾಗಲಿದೆ. ಯಾವಾಗಲೂ ಮೊಬೈಲ್ ಸ್ಕ್ರೀನ್ ಟಚ್ನಲ್ಲಿ ಇರಬೇಡಿ ಬದಲಿಗೆ ಒಬ್ಬರಿಗೊಬ್ಬರು ಟಚ್ನಲ್ಲಿ ಇರಿ ಎಂದು ಸಲಹೆ ನೀಡಿದರು.

ಮೊಬೈಲ್ ಬಳಕೆಯೇ ಬದುಕಾಗಬಾರದು. ಬಳಕೆ ಹೆಚ್ಚಿದಂತೆಲ್ಲ ಟೆಲಿಗ್ರಾಂ, ರೇಡಿಯೋ, ಟೇಪ್ ರೆಕಾರ್ಡರ್ ವಿಸಿಪಿ ಹಾಗೂ ಕಾಗದ ಬರೆಯುವ ಕಲೆ ಸೇರಿದಂತೆ ಸಂಬಂಧಗಳನ್ನು ಕಳೆದುಕೊಂಡಿದ್ದೇವೆ. ಸಂಬಂಧಗಳ ಮೌಲ್ಯ ಕುಸಿದಂತೆಲ್ಲ ಸಹಬಾಳ್ವೆಯ ಬದುಕು ನೆಲ ಹಿಡಿಯುತ್ತಿದೆ ಎಂದರು.

ಇನ್ನು ಮಕ್ಕಳು ಓದಿ ಏನಾಗಬೇಕು ಅಥವಾ ಬೆಳೆದು ಯಾವ ವೃತ್ತಿ ಪಡೆಯಬೇಕು ಎಂದುಕೊಂಡಿರುತ್ತಾರೆಯೋ ಅದನ್ನು ಗಮನಿಸಿ ಪ್ರೋತ್ಸಾಹ ನೀಡಿದರೆ ಭವಿಷ್ಯದಲ್ಲಿ ಉತ್ತಮ ಬದುಕು ಕಟ್ಟಿಕೊಳ್ಳುತ್ತಾರೆ. ಇಲ್ಲವೇ ನಿಮಗಿಷ್ಟ ಬಂದಂತೆ ಒತ್ತಡ ಏರಿದರೆ ಮಕ್ಕಳು ಹಾದಿ ತಪ್ಪುವ ಸಾಧ್ಯತೆ ಹೆಚ್ಚಾಗಿರುತ್ತದೆ ಎಂದು ಪಾಲಕರಿಗೆ ಎಚ್ಚರಿಸಿದರು.

ಶಾಲೆ ವತಿಯಿಂದ ಕಳೆದ ತಿಂಗಳು ನಡೆಸಿದ್ದ ಪಾಲಕರ ಕ್ರೀಡಾಕೂಟದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ಗೆಲುವು ಸಾಧಿಸಿದ್ದ ಪಾಲಕರಿಗೆ ಸಂಸ್ಥೆ ವತಿಯಿಂದ ಅಭಿನಂದಿಸಲಾಯಿತು. ನಂತರ ವಿದ್ಯಾರ್ಥಿಗಳು ಸಾಂಸ್ಕೃತಿಕ ಕಾರ್ಯಕ್ರಮ ನಡೆಸಿಕೊಟ್ಟರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್.ದೀಪ, ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ ಅನಿಲ್, ಶಿಕ್ಷಣ ಸಂಯೋಜಕ ಶ್ರೀನಿವಾಸ್, ಸಿಆರ್ ಪಿಗಳಾದ ಮಂಜೇಗೌಡ, ಧರ್ಮಪಾಲ್, ಎಚ್.ಎನ್.ಮೂರ್ತಿ, ಕರಿಯಪ್ಪ, ಹಿರಿಯಣ್ಣ, ಖಾಸಗಿ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಜೀವನ್, ಜ್ಞಾನಪ್ರಭ ಶಾಲೆಯ ಅಧ್ಯಕ್ಷ ಎ.ಜಿ.ಪ್ರಭಾಕರ್, ಕಾರ್ಯದರ್ಶಿ ಹರೀಶ್, ಪ್ರಾಂಶುಪಾಲ ಸಂಜಯ್ ಕ್ರಿಸ್ಟೋಫರ್, ಶಿಕ್ಷಕ ವೃಂದ ಹಾಗೂ ಪಾಲಕರು ಇದ್ದರು.

# ಕೋರೆಗಾಂವ್ ವಿಜಯೋತ್ಸವ ಹಲವು ಸಂಘಟನೆ ಬೆಂಬಲ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಇದೇ ಮೊದಲ ಬಾರಿಗೆ ನಾಳೆ ನಗರದಲ್ಲಿ ನಡೆಯುವ 208ನೇ ಭೀಮ ಕೋರೆಗಾಂವ್ ವಿಜಯೋತ್ಸವ ಕಾರ್ಯಕ್ರಮಕ್ಕೆ ಹಲವು ಸಂಘಟನೆಗಳು ಬೆಂಬಲ ವ್ಯಕ್ತಪಡಿಸಿವೆ ಎಂದು ದಲಿತ ವಿಮೋಚನೆ ಹಕ್ಕುಗಳ ವೇದಿಕೆ ರಾಜ್ಯ ಸಂಚಾಲಕ ಮರಿ ಜೋಸೆಫ್ ತಿಳಿಸಿದರು.

ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆದಿವಾಸಿ ಬುಡಕಟ್ಟು ಒಕ್ಕೂಟ, ಲಿಂಗತ್ವ ಅಲ್ಪಸಂಖ್ಯಾತರ ಚಳುವಳಿ, ಮುಸ್ಲಿಂ ಸಂಘಟನೆ ಸೇರಿದಂತೆ ಹತ್ತಾರು ಸಂಘಟನೆಗಳು ಬೆಂಬಲ ವ್ಯಕ್ತಪಡಿಸಿವೆ. ಬಲಿಷ್ಠರ ವಿರುದ್ಧ ನಡೆದ ಕೋರೆಗಾಂವ್ ಹೋರಾಟ ಇತಿಹಾಸದಲ್ಲಿ ಉಳಿದಿದೆ. ಇದರ ವಿಜಯೋತ್ಸವ ಮೊದಲ ಬಾರಿಗೆ ನಗರದಲ್ಲಿ ನಡೆಯುತ್ತಿರುವುದು ಸಂತಸದ ವಿಷಯ. ಅದರಲ್ಲೂ ಇದರಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಮೊಮ್ಮಗ ಭಾಗಿಯಾಗುತ್ತಿರುವುದು ನಮ್ಮ ಸಂತಸ ಇಮ್ಮಡಿಗೊಳಿಸಿದೆ. ಹಾಗಾಗಿ ಎಲ್ಲ ಸಂಘಟನೆಗಳ ಮುಖಂಡರು, ಸಾರ್ವಜನಿಕರು ಭಾಗಿಯಾಗಿ ಇದನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.ಸುದ್ದಿಗೋಷ್ಠಿಯಲ್ಲಿ ರತನ್, ಮೋನಿಕಾ, ಹೂರಾಜ್, ನವೀನ್ ಸದಾ, ಮುಷವೀರ್ ಮೊದಲಾದವರಿದ್ದರು.

# 80 ಲಕ್ಷದ ಆರ್‌ಸಿಸಿ-ಚರಂಡಿ ಕಾಮಗಾರಿಗೆ ಶಾಸಕ ಚಾಲನೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಮಹಾನಗರ ಪಾಲಿಕೆ ವ್ಯಾಪ್ತಿಯ 8ನೇ ವಾರ್ಡಿನ ಸಿ.ಎಸ್.ಎ. ಲೇಔಟ್‌ನಲ್ಲಿ ಹಲವು ವರ್ಷಗಳಿಂದ ರಸ್ತೆ ಹಾಗೂ ಚರಂಡಿ ವ್ಯವಸ್ಥೆಯ ಕೊರತೆಯಿಂದ ನಾಗರಿಕರು ಸಂಕಷ್ಟ ಅನುಭವಿಸುತ್ತಿದ್ದರು. ಈ ಸಮಸ್ಯೆಗೆ ಶಾಶ್ವತ ಪರಿಹಾರವಾಗಿ ಸೋಮವಾರ 80 ಲಕ್ಷ ರೂ. ವೆಚ್ಚದ ಕಾಂಕ್ರೀಟ್ ರಸ್ತೆ ಮತ್ತು ಕಾಂಕ್ರೀಟ್ ಚರಂಡಿ ಕಾಮಗಾರಿಗೆ ಕ್ಷೇತ್ರದ ಶಾಸಕ ಹೆಚ್.ಪಿ. ಸ್ವರೂಪ್ ಪ್ರಕಾಶ್ ಗುದ್ದಲಿ ಪೂಜೆ ನೆರವೇರಿಸಿದರು.

ನಂತರ ಶಾಸಕರು ಮಾಧ್ಯಮದೊಂದಿಗೆ ಮಾತನಾಡಿ, ಪಾಲಿಕೆಯ ಅನುದಾನದಲ್ಲಿ ಕೈಗೆತ್ತಿಕೊಳ್ಳಲಾದ ಈ ಕಾಮಗಾರಿಗೆ ಮಾಜಿ ಮೇಯರ್ ಗಿರೀಶ್ ಚನ್ನವೀರಪ್ಪ ಅವರ ಮಹತ್ವದ ಸಹಕಾರ ದೊರೆತಿದ್ದು, ಅನುದಾನದ 80 ಲಕ್ಷ ರೂಗಳ ವೆಚ್ಚದಲ್ಲಿ ಕಾಂಕ್ರಿಟ್ ರಸ್ತೆ ಮತು ಕಾಂಕ್ರಿಟ್ ಚರಂಡಿ ಕಾಮಗಾರಿಗೆ ಸೋಮವಾರದಂದು ಗುದ್ದಲಿ ಪೂಜೆ ನೆರವೇರಿಸಲಾಗಿದೆ.

ಲೇಔಟ್‌ನ ಎಲ್ಲಾ ನಿವಾಸಿಗಳಿಗೆ ಇದು ಬಹು ಉಪಯುಕ್ತವಾಗಲಿದೆ ಎಂದು ಅವರು ಹೇಳಿದರು. ಹಲವು ವರ್ಷಗಳಿಂದಲೂ ಈ ಕಾಮಗಾರಿಗೆ ಬೇಡಿಕೆ ಇದ್ದು, ಇದೀಗ ನೆರವೇರುತ್ತಿರುವುದು ಸಂತಸದ ಸಂಗತಿ ಎಂದರು.

ಗುತ್ತಿಗೆದಾರರು ಗುಣಮಟ್ಟದ ಕೆಲಸ ನಿರ್ವಹಿಸಿ ಕಾಮಗಾರಿ ಶೀಘ್ರ ಆರಂಭಿಸಿ ಪೂರ್ಣಗೊಳಿಸಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ಮಾಜಿ ಮೇಯರ್ ಗಿರೀಶ್ ಚನ್ನವೀರಪ್ಪ ಮಾತನಾಡಿ, ಸಿ.ಎಸ್.ಎ. ಲೇಔಟ್‌ನಲ್ಲಿ ಮೂಲಭೂತ ಸೌಕರ್ಯಗಳಾದ ರಸ್ತೆ ಹಾಗೂ ಚರಂಡಿ ಕಾಮಗಾರಿ ಬಹಳ ವರ್ಷಗಳ ಹಳೆಯ ಬೇಡಿಕೆಯಾಗಿತ್ತು. ಕಳೆದ ಒಂದು ವರ್ಷದಿಂದ ನಿರಂತರ ಪ್ರಯತ್ನದ ಫಲವಾಗಿ, ಶಾಸಕರ ಸಲಹೆ ಹಾಗೂ ನಿವಾಸಿಗಳ ಬೇಡಿಕೆಯ ಮೇರೆಗೆ ಮಹಾನಗರ ಪಾಲಿಕೆಯ 80 ಲಕ್ಷ ರೂ. ಅನುದಾನದಲ್ಲಿ ಕಾಮಗಾರಿಗೆ ಚಾಲನೆ ನೀಡಲಾಗಿದೆ ಎಂದು ತಿಳಿಸಿದರು. ಕಾಮಗಾರಿ ಶೀಘ್ರ ಮುಗಿದು ಸಾರ್ವಜನಿಕರ ಉಪಯೋಗಕ್ಕೆ ಬರಲಿ ಎಂದು ಅವರು ಹಾರೈಸಿದರು.

ಕಾರ್ಯಕ್ರಮದಲ್ಲಿ ವಿಷ್ಣು ಸೇನೆ ಜಿಲ್ಲಾಧ್ಯಕ್ಷ ಮಹಂತೇಶ್ ಸೇರಿದಂತೆ ಸ್ಥಳೀಯ ಮುಖಂಡರು ಹಾಗೂ ಲೇಔಟ್‌ನ ನಿವಾಸಿಗಳು ಉಪಸ್ಥಿತರಿದ್ದರು.

# ಅಧ್ಯಕ್ಷ ಸ್ಥಾನಕ್ಕೆ ಅವಿರೋಧ ಆಯ್ಕೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬಾಗೂರು : ಹೋಬಳಿ ಕೇಂದ್ರದ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನಕ್ಕೆ ಸೋಮವಾರ ನಡೆದ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತ ಮೀನಾಕ್ಷಿ ಡಿಎನ್ ಉಮೇಶ್ ಅವಿರೋಧವಾಗಿ ಆಯ್ಕೆಗೊಂಡರು.

ಈ ಹಿಂದೆ ಅಧ್ಯಕ್ಷರಾಗಿದ್ದ ಅಣ್ಣೇಗೌಡ( ಸ್ವಾಮಿ ) ರಾಜೀನಾಮೆ ನೀಡಿದ್ದರಿಂದ ತೆರವಾದ ಸ್ಥಾನಕ್ಕೆ ಚುನಾವಣೆ ನಡೆಯಿತು ಮೀನಾಕ್ಷಿ ಡಿ ಎನ್ ಉಮೇಶ್ ಹೊರತುಪಡಿಸಿ ಬೇರೆ ಯಾವ ಸದಸ್ಯರು ಅಧ್ಯಕ್ಷ ಸ್ಥಾನಕ್ಕೆ ನಾಮಪತ್ರ ಸಲ್ಲಿಸದೆ ಇದ್ದುದ್ದರಿಂದ ಅವಿರೋಧ ಆಯ್ಕೆಯನ್ನು ಚುನಾವಣಾಧಿಕಾರಿ ಗಿರೀಶ್ ಘೋಷಿಸಿದರು.

ಅವಿರೋಧವಾಗಿ ಆಯ್ಕೆಗೊಂಡ ಮೀನಾಕ್ಷಿ ಡಿ ಎನ್ ಉಮೇಶ್ ಅವರನ್ನು ಶಾಸಕ ಸಿಎನ್ ಬಾಲಕೃಷ್ಣರವರು ಅಭಿನಂದಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಹೋಬಳಿ ಕೇಂದ್ರದ ಅಭಿವೃದ್ಧಿಯ ದೃಷ್ಟಿಯಿಂದ ಸುಮಾರು 4 ಕೋಟಿ ವೆಚ್ಚದಲ್ಲಿ ವಿವಿಧ ಮುಖ್ಯ ರಸ್ತೆಗಳ ಅಭಿವೃದ್ಧಿ ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅನೇಕ ಬಡಾವಣೆಗಳ ರಸ್ತೆ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡಲಾಗಿದೆ ಇದರ ಜೊತೆಗೆ ಪ್ರವಾಸಿ ಮಂದಿರ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ತಲಾ 2 ಕೋಟಿ ಅನುದಾನ ನೀಡಲಾಗಿದೆ ಸಿಕ್ಕಿರುವ ಅವಕಾಶವನ್ನು ಸದುಪಯೋಗ ಪಡೆದುಕೊಳ್ಳುವ ಮೂಲಕ ಅಭಿವೃದ್ಧಿಗೆ ಆದ್ಯತೆ ನೀಡುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ಎಪಿಎಂಸಿ ಮಾಜಿ ಅಧ್ಯಕ್ಷ ಬಿಹೆಚ್ ಶಿವಣ್ಣ, ತಾಪಂ ಮಾಜಿ ಸದಸ್ಯ ಓಬಳಾಪುರ ಬಸವರಾಜ್, ಉದ್ಯಮಿ ಅಣತಿ ಯೋಗೇಶ್, ಬಾಗೂರು ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ದ್ಯಾವೇನಹಳ್ಳಿ ಶಿವಣ್ಣ, ಪ್ರಥಮ ದರ್ಜೆ ಗುತ್ತಿಗೆದಾರ ವರುಣ್, ಸದಸ್ಯರಾದ ಬಿಪಿ ಲಕ್ಷ್ಮಣ್, ಕೆಂಪೇಗೌಡ, ಸುಮಿತ್ರ ಮಂಜೇಗೌಡ, ಶಂಕರ್, ರೇಣುಕಾ ಕಾಳೇಶ್, ಮುಖಂಡರಾದ ಚಂದ್ರೇಗೌಡ, ಮನು, ಹುಲಿಕೆರೆ ಸಂಪತ್ ಕುಮಾರ್, ಜಗದೀಶ್, ಬಸವಲಿಂಗ, ಪಿಡಿಒ ಎಸ್ ರಮೇಶ್, ಬಿಲ್ ಕಲೆಕ್ಟರ್ ನವೀನ್ ಸೇರಿದಂತೆ ಜೆಡಿಎಸ್ ಮುಖಂಡರು ಹಾಗೂ ಗ್ರಾಮಸ್ಥರು ಹಾಜರಿದ್ದರು.

# ಸಕಲೇಶಪುರ: ಪೂರ್ಣಚಂದ್ರ ತೇಜಸ್ವಿ ಸಾಂಸ್ಕೃತಿಕ ಕೇಂದ್ರದಲ್ಲಿ 'ಮಂತ್ರಮಾಂಗಲ್ಯ'

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ರಕ್ಷಿದಿಯ ಪೂರ್ಣಚಂದ್ರ ತೇಜಸ್ವಿ ಸಾಂಸ್ಕೃತಿಕ ಕೇಂದ್ರದಲ್ಲಿ ಭಾನುವಾರ ಕುವೆಂಪು ಆದರ್ಶದ ಮಂತ್ರಮಾಂಗಲ್ಯ ಸರಳ ವಿವಾಹದ ಮೂಲಕ ಸಕಲೇಶಪುರ ತಾಲೂಕಿನ ಹಿರಿಯ ಜೀವ ಅಪ್ಪಿ ಅಜ್ಜಿ ಅವರ ಮೊಮ್ಮಗಳು ಮೋನಿಕಾ ಹಾಗೂ ಬಾಗೆಯ ಎ. ಮಂಜುನಾಥ್ ಸತಿ-ಪತಿಗಳಾದರು.

ಮೋನಿಕಾ ಪಿಯುಸಿ ವಿದ್ಯಾಭ್ಯಾಸ ಮಾಡಿದ್ದು, ವರ ಮಂಜುನಾಥ್ ಐಟಿಐ ಶಿಕ್ಷಣ ಪಡೆದಿದ್ದಾರೆ. ಹೋರಾಟದ ಬದುಕು ಕಂಡ ಅಪ್ಪಿ ಅಜ್ಜಿ ಕುಟುಂಬದ ಹಿನ್ನೆಲೆ ಈ ವಿವಾಹಕ್ಕೆ ವಿಶೇಷ ಅರ್ಥವನ್ನು ನೀಡಿತು.

ಅಪ್ಪಿ ಅಜ್ಜಿಯ ಪುತ್ರ ಕೃಷ್ಣಪ್ಪ ಅಕಾಲಿಕವಾಗಿ ನಿಧನರಾಗಿದ್ದರೂ, ಕುಟುಂಬದ ಮೇಲೆ ಅವರ ಸಂಸ್ಕಾರ ಮತ್ತು ಮೌಲ್ಯಗಳು ಮುಂದುವರಿದಿವೆ. ಕೃಷ್ಣಪ್ಪ ಅವರ ಪುತ್ರ ಚೇತನ್ ಸಹ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದಾನೆ.

ಮೊಮ್ಮಗಳ ಮದುವೆಯನ್ನು ಪೂರ್ಣಚಂದ್ರ ತೇಜಸ್ವಿ ರಂಗಮಂದಿರದಲ್ಲೇ ನಡೆಸಬೇಕು ಎಂಬ ಅಪ್ಪಿ ಅಜ್ಜಿಯ ಆಸೆಯನ್ನು ಕುಟುಂಬಸ್ಥರು ಗೌರವಿಸಿ, ಸರಳತೆ ಮತ್ತು ಮೌಲ್ಯಾಧಾರಿತ ಮಂತ್ರಮಾಂಗಲ್ಯ ವಿವಾಹವನ್ನು ಆಯೋಜಿಸಿದರು. ಜೈ ಕರ್ನಾಟಕ ಸಂಘದ ಸದಸ್ಯರು, ಗ್ರಾಮಸ್ಥರು ಹಾಗೂ ಬಂಧುಮಿತ್ರರ ಸಮ್ಮುಖದಲ್ಲಿ ಸಮಾರಂಭ ನಡೆಯಿತು.

ಸಕಲೇಶಪುರ ಕ್ಷೇತ್ರದ ಮಾಜಿ ಶಾಸಕ ಹೆಚ್.ಎಂ. ವಿಶ್ವನಾಥ್ ಅವರು ವಧು ವರರಿಗೆ ವಿವಾಹ ಪ್ರಮಾಣವಚನ ಬೋಧಿಸಿದರು. ವಧು-ವರರ ತಂದೆತಾಯಿಯರೊಂದಿಗೆ, ವಿವಾಹಕ್ಕೆ ಪ್ರಮುಖ ಕಾರಣರಾದ ಅಪ್ಪಿ ಅಜ್ಜಿಯನ್ನು ವಿಶೇಷವಾಗಿ ಸನ್ಮಾನಿಸಲಾಯಿತು. ಸಮಾರಂಭಕ್ಕೆ ಆಗಮಿಸಿದ ಅತಿಥಿಗಳಿಗೆ ಸಂಕ್ರಾಂತಿ ಹಬ್ಬದ ಅಂಗವಾಗಿ ಎಳ್ಳು-ಬೆಲ್ಲ ವಿತರಿಸಲಾಯಿತು.



ಕಾರ್ಯಕ್ರಮದಲ್ಲಿ ಪತ್ರಕರ್ತ ಅರುಣ್ ರಕ್ಷಿದಿ, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ರಂಗನಾಥ್, ಬಿಜೆಪಿ ಮುಖಂಡ ರಾಜ್ ಕುಮಾರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಅಭಿವೃದ್ಧಿ ವಿಚಾರದಲ್ಲಿ ರಾಜಕೀಯ ಮಾಡಲ್ಲ : ಶಾಸಕ ಸಿಮೆಂಟ್ ಮಂಜು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಸಕಲೇಶಪುರ: ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಯೇ ನನ್ನ ಗುರಿ. ಅಭಿವೃದ್ಧಿ ವಿಚಾರದಲ್ಲಿ ರಾಜಕೀಯ ಮಾಡುವುದಿಲ್ಲ. ಈ ಸಂಬಂಧ ರಾಜ್ಯ ಕಾಂಗ್ರೆಸ್ ಸರ್ಕಾರದ ಜತೆಗೂ ಚರ್ಚಿಸಿ ಅನುದಾನ ಹಾಗೂ ಯೋಜನೆಗಳನ್ನು ತರುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲ್ಲೂಕಿನ ಹಾನುಬಾಳು ಹೋಬಳಿಯ ದೇವಾಲದಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನೂತನವಾಗಿ ಅಭಿವೃದ್ಧಿಪಡಿಸಿದ ರಸ್ತೆಗಳನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.

ಕೆಲವರು ಅಭಿವೃದ್ಧಿಯಲ್ಲೂ ರಾಜಕೀಯ ಮಾಡುತ್ತಾರೆ. ಆದರೆ ನನಗೆ ಅದು ಬೇಕಿಲ್ಲ. ಕಷ್ಟದಲ್ಲಿರುವವರಿಗೆ ನೆರವು ನೀಡುವ ಮಾನವೀಯತೆ ನನಗಿದೆ. ಕ್ಷೇತ್ರದ ಜನರ ನಿರೀಕ್ಷೆಗೆ ತಕ್ಕಂತೆ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ ಎಂದು ತಿಳಿಸಿದರು.

ಈ ಭಾಗದಲ್ಲಿ ಹಲವಾರು ವರ್ಷಗಳಿಂದ ಸಾರ್ವಜನಿಕರಿಗೆ ತೀವ್ರ ಅನಾನುಕೂಲವಾಗುತ್ತಿತ್ತು. ನಾನೇ ಖುದ್ದಾಗಿ ಸ್ಥಳಕ್ಕೆ ಭೇಟಿ ನೀಡಿ ರಸ್ತೆಯ ಸ್ಥಿತಿಯನ್ನು ಪರಿಶೀಲಿಸಿ ಅನುದಾನ ಮೀಸಲಿಟ್ಟಿದ್ದೇನೆ. ದೇವಾಲದಕೆರೆ ದೇವರುಂದ ಅತ್ತಿಬಿಡು ಬಾಣಿಬೈಲು ಹೊರಗಿನ ರಸ್ತೆಯನ್ನು 3 ಕೋಟಿ ವೆಚ್ಚದಲ್ಲಿ ನೂತನವಾಗಿ ನಿರ್ಮಿಸಲಾಗಿದೆ.

ಜೊತೆಗೆ ಹಿರೆಮಂದಿ ಹಾಗೂ ಕುಮ್ಮತ್ತಹಳ್ಳಿ ರಸ್ತೆಗಳನ್ನು 2.75 ಕೋಟಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಿ ಸಾರ್ವಜನಿಕರ ಬಳಕೆಗೆ ಲೋಕಾರ್ಪಣೆ ಮಾಡಲಾಗಿದೆ ಎಂದು ಹೇಳಿದರು.

ದೇವಾಲದಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಈಗಾಗಲೇ ಹಲವು ಅಭಿವೃದ್ಧಿ ಕಾಮಗಾರಿಗಳು ನಡೆಯುತ್ತಿದ್ದು, ಇನ್ನೂ ಕೆಲವು ಕಾಮಗಾರಿಗಳಿಗೆ ಶೀಘ್ರದಲ್ಲೇ ಭೂಮಿ ಪೂಜೆ ನೆರವೇರಿಸಲಾಗುವುದು ಎಂದು ತಿಳಿಸಿದರು.

ಸಾರ್ವಜನಿಕರು ಸುಗಮವಾಗಿ ಸಂಚರಿಸುವ ರಸ್ತೆ, ಕುಡಿಯುವ ನೀರು ಹಾಗೂ ವಿದ್ಯುತ್‌ನಂತಹ ಕನಿಷ್ಠ ಮೂಲಭೂತ ಸೌಕರ್ಯಗಳನ್ನು ಒದಗಿಸುವುದು ಜನಪ್ರತಿನಿಧಿಗಳ ಕರ್ತವ್ಯ. ಈ ನಿಟ್ಟಿನಲ್ಲಿ ನಾನು ಪ್ರಾಮಾಣಿಕ ಪ್ರಯತ್ನ ನಡೆಸಿದ್ದೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರು, ಪಕ್ಷದ ಮುಖಂಡರು, ಗ್ರಾಮಸ್ಥರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# 1.20 ಕೋಟಿ ವೆಚ್ಚದ ಕಾಮಗಾರಿಗೆ ಭೂಮಿ ಪೂಜೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ನುಗ್ಗೇಹಳ್ಳಿ : ತಾಲೂಕಿನ ರೈತರಿಗೆ ಮುಂದಿನ 20 ವರ್ಷದವರೆಗೆ ಗುಣಮಟ್ಟದ ವಿದ್ಯುತ್ ನೀಡುವ ಸಲುವಾಗಿ ಹೋಬಳಿಯ ತೆಂಕನಹಳ್ಳಿ ಬಳಿ 220 ಕೆವಿ ರಿಸೀವ್ ಸ್ಟೇಷನ್ ನಿರ್ಮಾಣಕ್ಕೆ ಶೀಘ್ರ ಭೂಮಿ ಪೂಜೆ ನೆರವೇರಿಸಲಾಗುತ್ತದೆ ಎಂದು ಶಾಸಕ ಸಿಎನ್ ಬಾಲಕೃಷ್ಣ ತಿಳಿಸಿದರು.

ಹೋಬಳಿಯ ತೆಂಕನಹಳ್ಳಿ ಗ್ರಾಮದಲ್ಲಿ 1.20 ಕೋಟಿ ವೆಚ್ಚದ ಕಾಂಕ್ರೀಟ್ ಹಾಗೂ ಡಾಂಬರ್ ರಸ್ತೆ ಕಾಮಗಾರಿಗೆ ಭಾನುವಾರ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ತಾಲೂಕಿನ ರೈತರಿಗೆ ಮುಂದಿನ 20 ವರ್ಷದವರೆಗೆ ಕೃಷಿ ಚಟುವಟಿಕೆಗಳಿಗೆ ನಡೆಸಲು ಅನುಕೂಲ ಮಾಡಿಕೊಡುವ ದೃಷ್ಟಿಯಿಂದ ಕೃಷಿ ಪಂಪ್ ಸೆಟ್ ಗಳಿಗೆ ಗುಣಮಟ್ಟದ ವಿದ್ಯುತ್ ನೀಡಲು ಗ್ರಾಮದ ಬಳಿ 220 ಕೆವಿ ರಿಸಿವ್ ಸ್ಟೇಷನ್ ಗೆ ಈಗಾಗಲೇ ಇಂಧನ ಇಲಾಖೆಯಿಂದ ಅನುಮೋದನೆ ದೊರೆತು ಟೆಂಡರ್ ಪ್ರಕ್ರಿಯೆ ಪ್ರಾರಂಭಗೊಂಡಿದೆ ಶೀಘ್ರದಲ್ಲೇ ಯೋಜನೆಗೆ ಭೂಮಿ ಪೂಜೆ ನೆರವೇರಿಸಲಾಗುತ್ತದೆ ಎಂದರು.

ಗ್ರಾಮದಲ್ಲಿ ಸುಮಾರು 800 ಮೀಟರ್ ಕಾಂಕ್ರೀಟ್ ರಸ್ತೆ 700 ಮೀಟರ್ ಡಂಬರ್ ರಸ್ತೆ ಹಾಗೂ 200 ಮೀಟರ್ ಒಳಚರಂಡಿ ನಿರ್ಮಾಣಕ್ಕೆ 1.20 ಕೋಟಿ ಅನುದಾನ ಬಿಡುಗಡೆಯಾಗಿದೆ ಈ ಹಿಂದೆ ಚನ್ನರಾಯಪಟ್ಟಣ- ನುಗ್ಗೇಹಳ್ಳಿ ಮುಖ್ಯ ರಸ್ತೆಯಿಂದ ತೆಂಕನಹಳ್ಳಿ ಗ್ರಾಮದಿಂದ ಹುಲಿಕೆರೆ ಗ್ರಾಮದವರೆಗೆ ಸುಮಾರು 4 ಕೋಟಿ ವೆಚ್ಚದಲ್ಲಿ ಗ್ರಾಮದ ಮುಖ್ಯ ರಸ್ತೆಯನ್ನು ಅಭಿವೃದ್ಧಿಪಡಿಸಲಾಗಿದೆ ಹಾಗೂ ಗ್ರಾಮದ ಹಲವು ಬಡಾವಣೆಗಳಿಗೆ ನಿರಂತರ ಸೌಲಭ್ಯ ಕಲ್ಪಿಸಲಾಗಿದೆ ಗ್ರಾಮದ ಶಾಲಾ ಕಟ್ಟಡಕ ಹಾಗೂ ಈಶ್ವರ ದೇವಾಲಯ ಜೀರ್ಣೋದ್ಧಾರಕ್ಕೂ ಹೆಚ್ಚಿನ ಅನುದಾನ ನೀಡಲಾಗಿದೆ ಮುಂಬರುವ ಆರ್ಥಿಕ ವರ್ಷದಲ್ಲಿ ದೇವಾಲಯದ ಕಾಂಪೌಂಡ್ ನಿರ್ಮಾಣಕ್ಕೆ 3 ಲಕ್ಷ ಅನುದಾನ ಕೊಡುವುದಾಗಿ ಭರವಸೆ ನೀಡಿದರು.

ಗ್ರಾಮ ಪಂಚಾಯಿತಿ ಸದಸ್ಯ ತೆಂಕನಹಳ್ಳಿ ಮಹೇಶ್ ಮಾತನಾಡಿ ಗ್ರಾಮದಲ್ಲಿ ಕಾಂಕ್ರೀಟ್ ರಸ್ತೆ ಹಾಗೂ ಒಳಚರಂಡಿ ನಿರ್ಮಾಣಕ್ಕೆ ಕ್ಷೇತ್ರದ ಶಾಸಕರು ಹಾಗೂ ಮಾಜಿ ವಿಧಾನ ಪರಿಷತ್ ಸದಸ್ಯರಾದ ಎಂಎ ಗೋಪಾಲಸ್ವಾಮಿ ಅವರ ಮನವಿ ಮೇರೆಗೆ ಜಿಲ್ಲಾ ಉಸ್ತುವಾರಿ ಸಚಿವರ ಸಹಕಾರದೊಂದಿಗೆ ಲೋಕ ಉಪಯೋಗಿ ಸಚಿವರು ವಿಶೇಷ ಅನುದಾನದ ಅಡಿಯಲ್ಲಿ 3 ಕೋಟಿ ಅನುದಾನ ಬಿಡುಗಡೆ ಮಾಡಿದ್ದಾರೆ ಇದರಲ್ಲಿ ಗ್ರಾಮದ ವಿವಿಧ ರಸ್ತೆಗಳ ಅಭಿವೃದ್ಧಿಗೆ 1.20 ಕೋಟಿ ಹಾಗೂ ಬಾಗೂರು ಹೋಬಳಿಯ ಬೀಚಗೋಡನಹಳ್ಳಿ ಗ್ರಾಮದಲ್ಲಿ ರಸ್ತೆ ಅಭಿವೃದ್ಧಿಗೆ1.80 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಎಂದರು. ನೆರವೇರಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಲೋಕಪಯೋಗಿ ಸಹಾಯಕ ಎಂಜಿನಿಯರ್ ನಂಜುಂಡ, ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷ ರಾಜಶೇಖರ್, ಮುಖಂಡರುಗಳಾದ ನಟರಾಜ್, ನಾಗರಾಜ್, ದೊರೆಸ್ವಾಮಿ, ಜಯರಾಮ್, ರಂಗೇಗೌಡ, ಡೈರಿ ಕೃಷ್ಣೇಗೌಡ, ಶ್ರೀನಿವಾಸ್, ಹುಲಿಕೆರೆ ಸಂಪತ್ ಕುಮಾರ್, ದಿನೇಶ್, ಸದಾಶಿವ, ಬಸವರಾಜ್, ಕೆ ಕುಮಾರ್, ದಿನೇಶ್, ಪರಮೇಶ್, ನಂಜೇಗೌಡ, ರವಿ, ಉಮೇಶ್, ಗಂಗಾಧರ್, ವೆಂಕಟೇಶ್, ಗಂಗೆಗೌಡ, ಜಯಣ್ಣ, ನಿಂಗೇಗೌಡ, ಮೀಸೆ ಕುಮಾರ್, ಮಂಜು, ಸೇರಿದಂತೆ ಗ್ರಾಮಸ್ಥರು ಹಾಜರಿದ್ದರು.

# ಹೋಂ ಸ್ಟೇ-ರೇಸಾರ್ಟ್‌ಗಳ ಕಡ್ಡಾಯ ನೋಂದಣಿಗೆ ಸೂಚನೆ

ಹಾಸನ : ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಅನೇಕ ಹೋಂಸ್ಟೇಗಳು ಹಾಗೂ ರೆಸಾರ್ಟ್‌ಗಳು ಕಾರ್ಯನಿರ್ವಹಿಸುತ್ತಿದ್ದು, ಪ್ರವಾಸಿಗರ ಸುರಕ್ಷತೆ, ಗುಣಮಟ್ಟದ ಸೇವೆ, ಕಾನೂನುಬದ್ಧ ನಿರ್ವಹಣೆ ಹಾಗೂ ಪ್ರವಾಸೋದ್ಯಮ ಕ್ಷೇತ್ರದ ಸಮಗ್ರ ಅಭಿವೃದ್ಧಿಯ ದೃಷ್ಟಿಯಿಂದ ಕರ್ನಾಟಕ ಪ್ರವಾಸೋದ್ಯಮ ವ್ಯಾಪಾರ (ಸೌಲಭ್ಯ ಮತ್ತು ನಿಯಂತ್ರಣ) ಅಧಿನಿಯಮ 2015 ಅಡಿಯಲ್ಲಿ ಎಲ್ಲಾ ಹೋಂಸ್ಟೇಗಳು ಕರ್ನಾಟಕ ಪ್ರವಾಸೋದ್ಯಮ ಇಲಾಖೆ, ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿಯ ಅಧ್ಯಕ್ಷರು ತಿಳಿಸಿದ್ದಾರೆ.

ಹಲವು ಹೋಂಸ್ಟೇಗಳು ಹಾಗೂ ರೆಸಾರ್ಟ್‌ಗಳು ಕಾಯ್ದೆಯ ಪ್ರಕಾರ ನೋಂದಣಿ ಮಾಡಿಕೊಳ್ಳದೇ ಕಾರ್ಯನಿರ್ವಹಿಸುತ್ತಿರುವುದು ಗಮನಕ್ಕೆ ಬಂದಿದ್ದು, ಇದು ನಿಯಮ ಉಲ್ಲಂಘನೆಗಿದೆ.

ಜಿಲ್ಲೆಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಹೋಂಸ್ಟೇ ಹಾಗೂ ರೆಸಾರ್ಟ್‌ಗಳ ಮಾಲೀಕರು/ ನಿರ್ವಾಹಕರುಗಳು ಮೇಲಿನ ನಿಯಮದನ್ವಯ ಉಪ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಯಾತ್ರಿನಿವಾಸ ಆವರಣ ಎ.ವಿ.ಕೆ ಕಾಲೇಜು ರಸ್ತೆ, ಹಾಸನ ಇವರಿಗೆ ಅಗತ್ಯ ದಾಖಲಾತಿಗಳನ್ನು ನಿಯಮಾನುಸಾರ ಸಲ್ಲಿಸಿ 15 ದಿನಗಳೊಳಗೆ ಆಫ್ ಲೈನ್ ಮೂಲಕ ನೋಂದಣಿ ಮಾಡಿಕೊಳ್ಳಲು ಸೂಚಿಸಿದೆ.

ನಿಗದಿತ ಅವಧಿಯೊಳಗೆ ನೋಂದಣಿ ಮಾಡಿಕೊಳ್ಳದಿರುವ ಹೋಂಸ್ಟೇ ಹಾಗೂ ರೆಸಾರ್ಟ್ ಮಾಲೀಕರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೂಕನಬೆಟ್ಟದಲ್ಲಿ ವೈಭವದ ಬ್ರಹ್ಮ ರಥೋತ್ಸವ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ತಾಲ್ಲೂಕಿನ ಪುರಾಣ ಪ್ರಸಿದ್ಧ ಶ್ರೀಕ್ಷೇತ್ರ ಬೂಕನಬೆಟ್ಟದಲ್ಲಿ ಶ್ರೀ ರಂಗನಾಥಸ್ವಾಮಿಯ 95 ನೇ ವರ್ಷದ ಬ್ರಹ್ಮರಥೋತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ವಿಜೃಂಭಣೆಯಿಂದ ಜರುಗಿತು.

ಬೆಳಗ್ಗೆ ಬೆಟ್ಟದ ಮೇಲಿರುವ ಮೂಲ ವಿಗ್ರಹಕ್ಕೆ ಜಲಾಭಿಷೇಕ, ಪಂಚಾಮೃತ ಅಭಿಷೇಕ, ಕುಂಕುಮಾರ್ಚನೆ, ಪಷ್ಪಾರ್ಚನೆ ಮಾಡಲಾಯಿತು ಇದಾದ ಬಳಿಕ ವಿವಿಧ ಪುಷ್ಪ ಹಾಗೂ ಒಡವೆಗಳಿಂದ ಅಲಂಕಾರ ನೆರವೇರಿಸಿ ಪೂಜಾ ಕೈಂಕರ್ಯಗಳು ನೆರವೇರಿದವು, ನಂತರ ರಂಗನಾಥಸ್ವಾಮಿ ಉತ್ಸವ ಮೂರ್ತಿಯನ್ನು ಅಲಂಕರಿಸಿದ್ದು, ಅಡ್ಡಪಲ್ಲಕ್ಕಿಯಲ್ಲಿ ಮಂಗಳವಾದ್ಯದೊಂದಿಗೆ ಬೆಟ್ಟದ ಮೇಲಿಂದ ಉತ್ಸವದಲ್ಲಿ ಕರೆತಂದು ವಿವಿಧ ಪುಷ್ಪಗಳಿಂದ ಸಿಂಗರಿಸಲಾಗಿದ್ದ ರಥದಲ್ಲಿ ಪ್ರತಿಷ್ಠಾಪಿಸಲಾಯಿತು. ಮಧ್ಯಾಹ್ನ 12.55 ಶುಭ ಮೇಷಲಗ್ನ ಮುಹೂರ್ತದಲ್ಲಿ ಶಾಸಕ ಸಿ.ಎನ್.ಬಾಲಕೃಷ್ಣ ಬ್ರಹ್ಮರಥಕ್ಕೆ ವಿಶೇಷ ಪೂಜೆ ಸಲ್ಲಿಸಿ ಉತ್ಸವಕ್ಕೆ ಚಾಲನೆ ನೀಡಿದರು. ತಕ್ಷಣ ಸಹಸ್ರಾರು ಭಕ್ತರು ಗೋವಿಂದ ನಾಮಸ್ಮರಣೆಯೊಂದಿಗೆ ರಥವನ್ನು ಎಳೆದರು. ನೆರೆದಿದ್ದ ಭಕ್ತರು ಗೋವಿಂದ ಗೋವಿಂದ ಎಂಬ ಸ್ಮರಣೆಯೊಂದಿಗೆ ಭಕ್ತಿಬಾವದಲ್ಲಿ ತೇಲಿದರು. ರಥ ಸಾಗಿದಂತೆಲ್ಲಾ ಭಕ್ತರು ಬಾಳೆಹಣ್ಣು-ದವನ, ಹೂವು-ತುಳಸಿಪತ್ರೆಯನ್ನು ರಥಕ್ಕೆ ಎಸೆದು, ಕರ್ಪೂರ ಬೆಳಗಿಸಿ ಹರಕೆ ಸಲ್ಲಿಸಿ ಪುನೀತರಾದರು.



Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248